# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 583 |
| ಸದಸ್ಯರ ಹೆಸರು | : | ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿರಾದವರು) |
| ಉತ್ತರಿಸಬೇಕಾದ ದಿನಾಂಕ | : | 11-03-2025 |
| ಉತ್ತರಿಸುವವರು | : | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದಲ್ಲಿ ದಿನಾಂಕ:15-03-2024 ಸಂಖ್ಯೆ:1012224 ಸ್ಥಳೀಯ ವೃಂದ ಮತ್ತು ಸ್ಥಳೀಯೇತರ ವೃಂದ ನೇಮಕಾತಿಗಾಗಿ ಅರ್ಜಿ ಕರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ನೇಮಕಾತಿ ಪ್ರಕ್ರಿಯೆ ನಡೆಯದಿರಲು ಕಾರಣವೇನು? | ಹಟ್ಟಿ ಚಿನ್ನದ ಗಣಿ ಕಂಪನಿಯಲ್ಲಿ ದಿನಾಂಕ:15-03-2024 ಮತ್ತು 16-03-2024 ರಂದು ಸ್ಥಳೀಯ ಮತ್ತು ಸ್ಥಳಿಯೇತರ ವೃಂದದಲ್ಲಿನ ಹುದ್ದೆಗಳ ನೇಮಕಾತಿಗಾಗಿ ಅರ್ಜಿಗಳನ್ನು ಕರೆಯಲಾಗಿರುತ್ತದೆ.<br><br>ಹಟ್ಟಿ ಚಿನ್ನದ ಗಣಿ ಕಂಪನಿಯ ಸಿಬ್ಬಂದಿ ಮತ್ತು ಕಾರ್ಮಿಕರ ವೃಂದ ಮತ್ತು ನೇಮಕಾತಿಯ ಸಮಗ್ರ ಪರಿಷ್ಕರಣೆ ಕುರಿತು ಪರಿಶೀಲಿಸಲಾಗುತ್ತಿದ್ದು, ಆರ್ಥಿಕ ಇಲಾಖೆಯ ಅಭಿಪ್ರಾಯದನ್ವಯ ಸರ್ಕಾರದ ಆದೇಶ ಸಂ:ಸಿಐ 67 ಸಿಎಂಸಿ 2022 ದಿನಾಂಕ:10-10-2023 ರಂದು ಹಟ್ಟಿ ಚಿನ್ನದ ಗಣಿ ಸಂಸ್ಥೆಯ G5 ಮತ್ತು G8 ದರ್ಜೆಯಲ್ಲಿನ ಒಟ್ಟು 157 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕಾರ್ಯಕಾರಿ ಆದೇಶ ಹೊರಡಿಸಲಾಗಿರುತ್ತದೆ. ದಿನಾಂಕ:17-02-2024 ರ ವ್ಯವಸ್ಥಾಪಕ ನಿರ್ದೇಶಕರು, ಹಟ್ಟಿ ಚಿನ್ನದ ಗಣಿ ಕಂಪನಿ ಇವರು ದಿನಾಂಕ:10-10-2023 ರಂದು ಸದರಿ ಕಾರ್ಯಕಾರಿ ಆದೇಶದಲ್ಲಿನ ಹುದ್ದೆಗಳಿಗೆ ಕನಿಷ್ಠ ವಿದ್ಯಾರ್ಹತೆ ಮತ್ತು ಆಯ್ಕೆ ವಿಧಾನದಲ್ಲಿ ಪರಿಷ್ಕರಣೆ ಅಗತ್ಯವಿದ್ದುದರಿಂದ ತಿದ್ದುಪಡಿ ಆದೇಶ ಹೊರಡಿಸುವಂತೆ ಕೋರಿರುವುದರಿಂದ ಹಾಗೂ ಕೆಲವು ವಿಭಾಗಗಳಲ್ಲಿ ಮಹಿಳಾ ಮತ್ತು ಅಂಗವಿಕಲ ಅಭ್ಯರ್ಥಿಗಳಿಂದ ವಿನಾಯಿತಿ ಕೋರಿರುವುದರಿಂದ ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಭಿಪ್ರಾಯ ಕೋರಲಾಗಿದ್ದು, ಪ್ರಸ್ತುತ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಭಿಪ್ರಾಯ ನಿರೀಕ್ಷಣೆಯಲ್ಲಿದೆ. ಅದರಂತೆ ಮುಂದಿನ ಕ್ರಮವಹಿಸಲಾಗುವುದು. |
| ಆ) | ನೇಮಕಾತಿ ಪ್ರಕ್ರಿಯೆ ವಿಳಂಬ ಮಾಡಿ ಅಭ್ಯರ್ಥಿಗಳ ಭವಿಷ್ಯದಲ್ಲಿ ಹಟ್ಟಿ ಚಿನ್ನದ ಗಣಿ ಕಂಪನಿ ಆಟವಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; | |
| ಇ) | ನೇಮಕಾತಿ ಪ್ರಕ್ರಿಯೆ ಚಾಲನೆ ನೀಡಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಪತ್ರ ನೀಡುವುದು ಯಾವಾಗ? (ವಿವರ ನೀಡುವುದು) | |

ಸಂಖ್ಯೆ: ಸಿಐ 25 ಸಿಎಂಸಿ 2025

(ಎಸ್. ಎಸ್. ಮಲ್ಲಿಕಾರ್ಜುನ)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ
ಸಚಿವರು